**ದಿನಾಂಕ: 24-09-2025ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಪಾಟೀ ಸವಾಲು: ಆರೋಪಿ ಪರ ವಕೀಲರಿಂದ**

ಆರೋಪಿಯನ್ನು ಇದೇ ಮೊದಲ ಬಾರಿಗೆ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ. ನಾನು ದೂರನ್ನು ಯಾವಾಗ ಕೊಟ್ಟಿದ್ದೇನೆಂದು ಹೇಳಲು ಬರುವುದಿಲ್ಲ. ನನ್ನ ದೂರಿನಲ್ಲಿ ಏನು ಬರೆದಿದೆ ಎಂದು ಹೇಳಲು ಬರುವುದಿಲ್ಲ. ನೀವು ದೂರು ಕೊಟ್ಟ ನಂತರ ಪೊಲೀಸರು ನಿಮ್ಮ ಹತ್ತಿರ ಬಂದಿಲ್ಲ ಎಂದರೆ ಬಂದಿಲ್ಲ ಎಂದು ಉತ್ತರಿಸುತ್ತಾರೆ. ಅಪಘಾತದ ಬಗ್ಗೆ ನಿಮಗೆ ಯಾವುದೇ ಮಾಹಿತಿ ಇಲ್ಲ ಮತ್ತು ನೀವು ಅಪಘಾತವಾದ ಸ್ಥಳದಲ್ಲಿ ಇರಲಿಲ್ಲ ಎಂದರೆ ಸರಿ. ಈ ಅಪಘಾತದಲ್ಲಿ ಮೃತಪಟ್ಟಂತಹ ಮಹಿಳೆಯು ನಿಮ್ಮ ಪರಿಚಯಸ್ಥಳಾಗಿದ್ದರಿಂದ ಅವರಿಗೆ ಪರಿಹಾರ ಕೊಡಿಸುವ ಉದ್ದೇಶದಿಂದ ಈ ಸುಳ್ಳು ದೂರು ನೀಡಿರುತ್ತೀರಿ ಎಂದರೆ ಸರಿಯಲ್ಲ. ನಿಮ್ಮ ಮುಖ್ಯ ವಿಚಾರಣೆಯಲ್ಲಿ ನೀವು ಹೇಳಿದಂತಹ ಎಲ್ಲಾ ವಿಚಾರಗಳು ಸುಳ್ಳಿನಿಂದ ಕೂಡಿವೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕ 20-08-2025 ರಂದು ನೀವು ಅಭಿಯೋಜನೆಗೆ ಪೂರಕವಾಗಿ ಸಾಕ್ಷಿ ಹೇಳಿರುತ್ತೀರಿ ಎಂದರೆ ಸರಿ. ಈಗ ನೀವು ಆರೋಪಿಗೆ ಸಹಾಯ ಮಾಡಲು ಅಪಘಾತದ ಬಗ್ಗೆ ಯಾವುದೇ ಮಾಹಿತಿ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ ಹೇ.ಕೇ. ಸರಿ ಅದೆ

ಹಿರಿಯ ಸಿವಿಲ್ ಮತ್ತು ಜೆ ಎಮ್ ಎಫ್ ಸಿ ನ್ಯಾಯಾಧೀಶರು,
ಜೇವರ್ಗಿ